**National**
**Kannada**
**03.12.2025 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ವಿಶೇಷಚೇತನರ ಸಬಲೀಕರಣದಲ್ಲಿ ಅನುಕರಣೀಯ ಪ್ರಯತ್ನಕ್ಕಾಗಿ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು

2. ದೇಶಾದ್ಯಂತ ಸುಮಾರು ನೂರು ಪ್ರತಿಶತ ಪಡಿತರ ಚೀಟಿ ಡಿಜಿಟಲೀಕರಣ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

3. ಸುಳ್ಳು ಸುದ್ದಿ ಪ್ರಜಾಪ್ರಭುತ್ವಕ್ಕೆ ಒಂದು ಬೆದರಿಕೆಯಾಗಿದೆ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

4. ದಿತ್ವಾ ಚಂಡಮಾರುತ ಪ್ರಭಾವ: ಶ್ರೀಲಂಕಾದಲ್ಲಿ ಮೃತಪಟ್ಟವರ ಸಂಖ್ಯೆ ೪೭೪ ಕ್ಕೆ ಏರಿಕೆ; ಭಾರತದಿಂದ ನೆರವು ಮುಂದುವರಿಕೆ

5. ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯ: ಭಾರತ ವಿರುದ್ಧ ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ತಂಡ ಫೀಲ್ಡಿಂಗ್ ಆಯ್ಕೆ

<><><><>

೨೦೨೫ ರ ಅಂತಾರಾಷ್ಟ್ರೀಯ ವಿಶೇಷಚೇತನರ ದಿನದ ಸಂದರ್ಭದಲ್ಲಿ, ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನವದೆಹಲಿಯಲ್ಲಿ ವಿಶೇಷಚೆತನರ ಸಬಲೀಕರಣದಲ್ಲಿ ಅನುಕರಣೀಯ ಪ್ರಯತ್ನಕ್ಕಾಗಿ ವ್ಯಕ್ತಿಗಳು ಮತ್ತು ಸಂಸ್ಥೆಗಳಿಗೆ ರಾಷ್ಟ್ರೀಯ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಬಳಿಕ ಮಾತನಾಡಿದ ಅವರು, ವಿಶೇಷಚೇತನರು ಮಾಡಿದಂತಹ ಸಾಧನೆಗಳು ತಮಗೂ ಸೇರಿದಂತೆ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದರು. ಈ ಸಮಾರಂಭವು ವಿಶೇಷಚೇತನರ ದೃಢಸಂಕಲ್ಪ, ಸಮರ್ಪಣೆ ಮತ್ತು ಸಬಲೀಕರಣವನ್ನು ಆಚರಿಸುವ ಜೊತೆಗೆ ಅವರ ಧೈರ್ಯ ಮತ್ತು ಸಾಧನೆಗಳನ್ನು ಗೌರವಿಸುತ್ತದೆ. ವಿಶೇಷಚೇತನ ವಿದ್ಯಾರ್ಥಿಗಳು, ಹಿರಿಯ ರಾಜತಾಂತ್ರಿಕರು, ಉದ್ಯಮ ಪಾಲುದಾರರು ಮತ್ತು ವಿಶೇಷಚೆತನರ ಸಬಲೀಕರಣ ಇಲಾಖೆಯ ಗಣ್ಯರು ಮತ್ತು ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಿದ್ದಾರೆ.

<><><><>

ದೇಶಾದ್ಯಂತ ಸುಮಾರು ನೂರು ಪ್ರತಿಶತ ಪಡಿತರ ಚೀಟಿಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದು ಕೇಂದ್ರ ಆಹಾರ, ಸಾರ್ವಜನಿಕ ವಿತರಣೆ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ೨೦ ಕೋಟಿ ೫೮ ಲಕ್ಷ ಕುಟುಂಬಗಳ ಪಡಿತರ ಚೀಟಿಗಳು ಬಹುತೇಕ ಡಿಜಿಟಲೀಕರಣಗೊಂಡಿವೆ. ಪ್ರಧಾನಮಂತ್ರಿ

ಗರೀಬ್ ಕಲ್ಯಾಣ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ಉಚಿತ ಪಡಿತರವನ್ನು ಒದಗಿಸಲಾಗುತ್ತಿದೆ. ಇದು ೨೦೨೯ರವರೆಗೆ ಮುಂದುವರಿಯಲಿದೆ ಎಂದರು. ಈ ಯೋಜನೆಯಡಿಯಲ್ಲಿ ಅರ್ಹ ಕುಟುಂಬಗಳು ಪ್ರತಿ ವ್ಯಕ್ತಿಗೆ ಪ್ರತಿ ತಿಂಗಳು ಐದು ಕೆಜಿ ಉಚಿತ ಆಹಾರ ಧಾನ್ಯಗಳನ್ನು ಪಡೆಯುತ್ತವೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

<><><><>

ಸುಳ್ಳು ಸುದ್ದಿ ಪ್ರಜಾಪ್ರಭುತ್ವಕ್ಕೆ ಒಂದು ಬೆದರಿಕೆಯಾಗಿದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಸಾಮಾಜಿಕ ಮಾಧ್ಯಮ, ಸುಳ್ಳು ಸುದ್ದಿ ಮತ್ತು ಕೃತಕ ಬುದ್ಧಿ ಮತ್ತೆ ಬಳಕೆಯಿಂದ ಮಾರ್ಪಾಡಿಸಲಾದ ಮಾಹಿತಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಅಗತ್ಯವಿದೆ. ಇಂತಹ ಸುಳ್ಳು ಮಾಹಿತಿಗಳನ್ನು ಗುರುತಿಸಿ, ಅವುಗಳ ವಿರುದ್ಧ ಕ್ರಮಕೈಗೊಳ್ಳಲು ಹೊಸ ಕರಡು ನಿಯಮವನ್ನು ಪ್ರಕಟಿಸಲಾಗಿದೆ. ಯಾವುದೇ ವಾಹಿನಿ ಅಥವಾ ಪತ್ರಿಕೆಯ ವಿರುದ್ಧ ಬರುವ ದೂರುಗಳನ್ನು ಸರ್ಕಾರ ಮತ್ತು ಭಾರತೀಯ ಪತ್ರಿಕಾ ಮಂಡಳಿ ಸಕ್ರಿಯವಾಗಿ ಪರಿಶೀಲಿಸುತ್ತಿವೆ ಎಂದು ತಿಳಿಸಿದ್ದಾರೆ. ಸಮಾಜದಲ್ಲಿನ ವಿಶ್ವಾಸವನ್ನು ಕಾಪಾಡುವುದನ್ನು ಖಚಿತಪಡಿಸಿಕೊಳ್ಳಲು ಸಾಮೂಹಿಕವಾಗಿ ಕೆಲಸ ಮಾಡುವುದು ಕೇಂದ್ರ, ರಾಜ್ಯ ಸರ್ಕಾರಗಳು ಹಾಗೂ ನಾಗರಿಕ ಸಮಾಜದ ಜವಾಬ್ದಾರಿಯಾಗಿದೆ ಎಂದರು. ಡಿಜಿಟಲ್ ಇಂಡಿಯಾ ಉಪಕ್ರಮದ ಮೂಲಕ ದೇಶದಲ್ಲಿ ಹೊಸ ಕ್ರಾಂತಿ ಉಂಟಾಗಿದ್ದು, ದೇಶ ಅದರ ಸಕಾರಾತ್ಮಕ ಪರಿಣಾಮಗಳಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

<><><><>

ದೆಹಲಿ ಮಹಾನಗರ ಪಾಲಿಕೆಯ ೧೨ ವಾರ್ಡ್‌ಗಳಿಗೆ ನಡೆದ ಉಪಚುನಾವಣೆಯ ಫಲಿತಾಂಶ ಇಂದು ಪ್ರಕಟವಾಗಿದ್ದು, ಭಾರತೀಯ ಜನತಾ ಪಕ್ಷ-ಬಿಜೆಪಿ ಏಳು ಸ್ಥಾನಗಳನ್ನು ಗೆದ್ದಿದೆ. ಆಮ್‌ಆದ್ಮಿ ಪಕ್ಷ ೩ ಸ್ಥಾನಗಳನ್ನು ಗೆದ್ದಿದ್ದರೆ, ಕಾಂಗ್ರೆಸ್ ಹಾಗೂ ಸ್ಥಳೀಯ ಆಲ್ ಇಂಡಿಯಾ ಫಾರ್‌ವರ್ಡ್ ಬ್ಲಾಕ್ ತಲಾ ೧ ಸ್ಥಾನ ಗಳಿಸಿವೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಮಧ್ಯಾಹ್ನ ತಿರುವನಂತಪುರಂಗೆ ತೆರಳಲಿದ್ದು, ನೌಕಾಪಡೆಯ ಕಾರ್ಯಾಚರಣೆ ಪ್ರದರ್ಶನದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಶಂಗುಮುಖಂ ಕಡಲತೀರದಲ್ಲಿ ಭಾರತೀಯ ನೌಕಾಪಡೆಯ ಪ್ರದರ್ಶನ ನಡೆಯಲಿದ್ದು, ಈ ವೇಳೆ ಎಂ.ಹೆಚ್.೬೦ಆರ್ ಹೆಲಿಕಾಪ್ಟರ್ ಶಂಗುಮುಖಂನಲ್ಲಿ ರಾಷ್ಟ್ರಪತಿಗಳಿಗೆ ಭವ್ಯ ಗೌರವ ಸಲ್ಲಿಸಲಿದೆ. ಕಾರ್ಯಾಚರಣೆ ಪ್ರದರ್ಶನವು ನೌಕಾಪಡೆಯ ಶಕ್ತಿ ಮತ್ತು ಯುದ್ಧ ಸನ್ನದ್ಧತೆಯನ್ನು ಪ್ರದರ್ಶಿಸುತ್ತದೆ. ಇದರಲ್ಲಿ ೧೯ ಪ್ರಮುಖ ಯುದ್ಧನೌಕೆಗಳು ಮತ್ತು ಯುದ್ಧ ವಿಮಾನಗಳು ಮತ್ತು ಕಣ್ಗಾವಲು

ವಿಮಾನಗಳು ಸೇರಿದಂತೆ ೩೨ ವಿಮಾನಗಳಿವೆ. ಕಾರ್ಯಕ್ರಮದ ನಂತರ, ರಾಷ್ಟ್ರಪತಿಗಳು ಲೋಕ ಭವನಕ್ಕೆ ತೆರಳಲಿದ್ದಾರೆ.

<><><><>

ದಿತ್ವಾ ಚಂಡಮಾರುತದ ಪ್ರಭಾವದಿಂದ ಸಂಭವಿಸಿದ ಭೀಕರ ಪ್ರವಾಹ ಮತ್ತು ಭೂಕುಸಿತದಿಂದ ಶ್ರೀಲಂಕಾದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೪೭೪ ಕ್ಕೆ ಏರಿದೆ. ಇನ್ನೂ ೩೫೬ ಜನರು ನಾಪತ್ತೆಯಾಗಿದ್ದಾರೆ ಎಂದು ವಿಪತ್ತು ನಿರ್ವಹಣಾ ಕೇಂದ್ರ ದೃಢಪಡಿಸಿದೆ. ಕ್ಯಾಂಡಿ ಜಿಲ್ಲೆಯು ಅತಿ ಹೆಚ್ಚು ಹಾನಿಗೊಳಗಾಗಿದ್ದು, ೧೧೮ ಮಂದಿ ಮೃತಪಟ್ಟಿದ್ದಾರೆ. ಭಾರತವು, ಆಪರೇಷನ್ ಸಾಗರ್ ಬಂಧು ಅಡಿಯಲ್ಲಿ ತನ್ನ ಮಾನವೀಯ ನೆರವನ್ನು ಗಮನಾರ್ಹವಾಗಿ ವಿಸ್ತರಿಸಿದೆ, ಐಎನ್ಎಸ್ ಸುಕನ್ಯಾ ಮೂಲಕ ಟ್ರಿನ್ಕೊಮಲಿಗೆ ತಲುಪಿಸಿದ ಸರಬರಾಜುಗಳನ್ನು ಶ್ರೀಲಂಕಾ ವಾಯುಪಡೆಯ ಮೂಲಕ ಪೂರ್ವ ಪ್ರಾಂತ್ಯದಾದ್ಯಂತ ಪ್ರತ್ಯೇಕ ಸಮುದಾಯಗಳಿಗೆ ವಿಮಾನದಲ್ಲಿ ಸಾಗಿಸಲಾಗಿದೆ. ಇದಲ್ಲದೆ, ಭಾರತೀಯ ರಕ್ಷಣಾ ತಂಡಗಳು ದೊಡ್ಡ ಪ್ರಮಾಣದ ಸ್ಥಳಾಂತರ ಕಾರ್ಯಾಚರಣೆ ನಡೆಸಿವೆ. ಪುಟ್ಟಲಂನಲ್ಲಿರುವ ಎನ್‌ಡಿಆರ್‌ಎಫ್ ಸಿಬ್ಬಂದಿ ಗರ್ಭಿಣಿಯರು ಮತ್ತು ಗಾಯಗೊಂಡವರು ಸೇರಿದಂತೆ ಸಿಲುಕಿಕೊಂಡಿದ್ದ ಸುಮಾರು ೮೦೦ ನಿವಾಸಿಗಳಿಗೆ ಸಹಾಯ ಮಾಡಿದ್ದಾರೆ.

<><><><>

ದೇಶದ ಮೊದಲ ರಾಷ್ಟ್ರಪತಿ ಡಾ. ರಾಜೇಂದ್ರ ಪ್ರಸಾದ್ ಅವರ ಜನ್ಮ ದಿನಾಚರಣೆ ಹಿನ್ನೆಲೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ರಾಷ್ಟ್ರಪತಿ ಭವನದಲ್ಲಿಂದು ಪುಷ್ಪ ನಮನ ಸಲ್ಲಿಸಿದರು. ೧೮೮೪ ಡಿಸೆಂಬರ್ ೩ ರಂದು ಬಿಹಾರದ ಜಿರಾಡೆಯಲ್ಲಿ ಜನಿಸಿದ ಡಾ.ರಾಜೇಂದ್ರ ಪ್ರಸಾದ್ ಅವರು ಭಾರತದ ಮೊದಲ ರಾಷ್ಟ್ರಪತಿಯಾಗಿ ಆಯ್ಕೆಯಾದರು. ಅವರು ಸಂವಿಧಾನ ಸಭೆಯ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದರು. ಅವರಿಗೆ ಗೌರವ ನಮನ ಸಲ್ಲಿಸಿರುವ ಪ್ರಧಾನಿ ನರೇಂದ್ರ ಮೋದಿ, ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸುವ ಜೊತೆಗೆ ಸಂವಿಧಾನ ಸಭೆಯ ಅಧ್ಯಕ್ಷತೆ ವಹಿಸಿದ್ದ ಡಾ.ರಾಜೇಂದ್ರ ಪ್ರಸಾದ್, ಅಸಾಮಾನ್ಯ ಘನತೆ, ಸಮರ್ಪಣೆ ಮತ್ತು ಸಂಕಲ್ಪದ ಸ್ಪಷ್ಟತೆಯೊಂದಿಗೆ ರಾಷ್ಟ್ರದ ಸೇವೆ ಸಲ್ಲಿಸಿದರು ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಡಾ. ರಾಜೇಂದ್ರ ಪ್ರಸಾದ್ ಅವರನ್ನು ಸ್ಮರಿಸಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಡಾ.ರಾಜೇಂದ್ರ ಪ್ರಸಾದ್ ಅವರ ಸರಳತೆ, ಸಮಗ್ರತೆ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳಿಗೆ ಅವರ ಜೀವಮಾನದ ಬದ್ಧತೆ, ಇಂದಿನ ಹಾಗೂ ಮುಂದಿನ ಪೀಳಿಗೆಗೆ ಸ್ಫೂರ್ತಿ ನೀಡುತ್ತದೆ ಎಂದು ಹೇಳಿದ್ದಾರೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಸ್ವಾತಂತ್ರ್ಯ ಹೋರಾಟಗಾರ ಖುದಿರಾಮ್ ಬೋಸ್ ಅವರ ಜನ್ಮ ವಾರ್ಷಿಕೋತ್ಸವ ಹಿನ್ನೆಲೆ ಗೌರವ ನಮನ ಸಲ್ಲಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ದೇಶದ ಯುವಕರನ್ನು ಪ್ರೇರೇಪಿಸಿದ ಖುದಿರಾಮ್ ಬೋಸ್ ಅವರು, ಶೌರ್ಯ, ಧೈರ್ಯ, ತ್ಯಾಗದ ಸಂಕೇತವಾಗಿದ್ದರು ಎಂದು ತಿಳಿಸಿದ್ದಾರೆ. ಸ್ವದೇಶಿ ಚಳವಳಿಯ ಸಮಯದಲ್ಲಿ ದೇಶವಾಸಿಗಳನ್ನು ಜಾಗೃತಗೊಳಿಸುವಲ್ಲಿ ಖುದಿರಾಮ್ ಬೋಸ್ ನಿರ್ಣಾಯಕ ಪಾತ್ರ ವಹಿಸಿದ್ದರು. ಎಂದು ಸಚಿವ ಅಮಿತ್ ಶಾ ಹೇಳಿದ್ದಾರೆ.

<><><>

ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನ ಒಂದು ವರ್ಷ ಪೂರೈಸುತ್ತಿರುವ ಸಂದರ್ಭದಲ್ಲಿ ನವದೆಹಲಿಯಲ್ಲಿ ನಾಳೆ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣಾದೇವಿ ಬಾಲ್ಯ ವಿವಾಹ ಮುಕ್ತ ಭಾರತಕ್ಕಾಗಿ ನೂರು ದಿನಗಳ ಜಾಗೃತಿ ಅಭಿಯಾನಕ್ಕೆ ಅಧಿಕೃತ ಚಾಲನೆ ನೀಡಲಿದ್ದಾರೆ. ಈ ಕಾರ್ಯಕ್ರಮ ಬಾಲ್ಯ ವಿವಾಹವನ್ನು ಕೊನೆಗೊಳಿಸುವ ರಾಷ್ಟ್ರೀಯ ಪ್ರತಿಜ್ಞೆ ಮತ್ತು ಸ್ಫೂರ್ತಿದಾಯಕ ಕತೆಗಳನ್ನು ಪ್ರದರ್ಶಿಸುವ ಚಲನಚಿತ್ರವನ್ನು ಒಳಗೊಂಡಿದ್ದು, ಸಾಮೂಹಿಕ ಪ್ರಗತಿಯನ್ನು ಉತ್ತೇಜಿಸುವುದು ಮತ್ತು ಈ ಅಭಿಯಾನಕ್ಕೆ ವೇಗ ನೀಡುವುದು ಇದರ ಉದ್ದೇಶವಾಗಿದೆ.

<><><>

ರಾಯ್‌ಪುರದ ಶಹೀದ್ ವೀರ್ ನಾರಾಯಣ್ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೂರು ಪಂದ್ಯಗಳ ಏಕದಿನ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ತಂಡದ ಎದುರು ಟಾಸ್ ಗೆದ್ದ ದಕ್ಷಿಣಾ ಆಫ್ರಿಕಾ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ. ಮೊದಲ ಏಕದಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ೧೭ ರನ್‌ಗಳಿಂದ ಸೋಲಿಸಿದ ನಂತರ ಭಾರತ ತಂಡ, ಪ್ರಸ್ತುತ ಸರಣಿಯಲ್ಲಿ ೧-೦ ಮುನ್ನಡೆಯಲ್ಲಿದೆ. ಮೊದಲ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಅವರ ೫೨ನೇ ಏಕದಿನ ಶತಕ ಹಾಗೂ ರೋಹಿತ್ ಶರ್ಮಾ, ಕೆ.ಎಲ್.ರಾಹುಲ್, ಅವರ ಸಮಯೋಚಿತ ಬ್ಯಾಟಿಂಗ್ ಪ್ರದರ್ಶನದೊಂದಿಗೆ ಭಾರತ ೩೪೯ ರನ್ ಗಳಿಸಿತ್ತು.

<><><>

ಮಹಿಳಾ ಹಾಕಿಯಲ್ಲಿ ಚಿಲಿಯ ಸ್ಯಾಂಟಿಯಾಗೊದಲ್ಲಿ ನಡೆಯಲಿರುವ ಎಫ್‌ಐಎಚ್ ಕಿರಿಯರ ಹಾಕಿ ವಿಶ್ವಕಪ್‌ನ ತಮ್ಮ ಎರಡನೇ ಗುಂಪು ಹಂತದ ಪಂದ್ಯದಲ್ಲಿ ಭಾರತೀಯ ಮಹಿಳಾ ತಂಡ ಜರ್ಮನಿಯನ್ನು ಎದುರಿಸಲಿದೆ. ಪಂದ್ಯ ಇಂದು ರಾತ್ರಿ ೭.೪೫ ಕ್ಕೆ ಆರಂಭವಾಗಲಿದೆ. ಪ್ರಸ್ತುತ ಭಾರತೀಯ ಮಹಿಳಾ ತಂಡ, ಸಿ ಗುಂಪಿನ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>